# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **78 (188)** |
| **ಸದಸ್ಯರ ಹೆಸರು** | **ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **04-12-2023** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಇವರಿಗೆ ನೀಡುತ್ತಿರುವ ವೇತನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು). | ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ 2023-24 ಸಾಲಿನಲ್ಲಿ ದಿನಾಂಕ: 28-11-2023 ರ ಅಂತ್ಯಕ್ಕೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ: 10311. ಇವರಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು ದಿನಾಂಕ:24.01.2022 ರನ್ವಯ ಜಾರಿಯಲ್ಲಿದ್ದ, ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಮಾಹೆಯಾನ ಈ ಕೆಳಕಂಡಂತೆ ಗೌರವಧನವನ್ನು ಪಾವತಿಸಲಾಗುತ್ತಿದೆ.<br><br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ರೂಪಾಯಿಗಳು ಮಾತ್ರ)<br><br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ).<br><br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ರೂಪಾಯಿಗಳು ಮಾತ್ರ)<br><br>ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ರೂಪಾಯಿಗಳು ಮಾತ್ರ). |
| ಆ) | ಸದರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಯಾವ ರೀತಿ ಕಾರ್ಯಭಾರವನ್ನು ಹಂಚಿಕೆ ಮಾಡಲಾಗಿದೆ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14-01-2022 ಮತ್ತು ದಿನಾಂಕ:24.01.2022 ರ ತಿದ್ದುಪಡಿ ಆದೇಶದನ್ವಯ ಕಲಾ, ವಾಣಿಜ್ಯ ವಿಷಯಗಳಿಗೆ ವಾರಕ್ಕೆ ಗರಿಷ್ಠ 15 ಗಂಟೆಗಳು ಹಾಗೂ ವಿಜ್ಞಾನ/ಪ್ರಾಯೋಗಿಕ ತರಗತಿಗಳಿಗೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ಹಂಚಿಕೆ ಮಾಡಲಾಗಿದೆ. |

| | | |
|---|---|---|
| ಇ) | ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರವು ಹೆಚ್ಚಾಗಿರುವುದರಿಂದ ಇದನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ವೇತನವು ಕಡಿಮೆಯಾಗಿರುವುದರಿಂದ ಇದನ್ನು ಹೆಚ್ಚಳ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಅತಿಥಿ ಉಪನ್ಯಾಸಕರಿಗೆ ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರಲ್ಲಿ ಈ ಹಿಂದೆ ಇದ್ದ 11,000/- ಮತ್ತು 13,000/- ಗಳ ಗೌರವಧನವನ್ನು 2022ನೇ ಸಾಲಿನಿಂದ ರೂ.26,000/- ರಿಂದ ರೂ.32,000/- ರವರೆಗೆ ಹೆಚ್ಚಿಸಲಾಗಿದೆ. |

ಇಡಿ 298 ಡಿಸಿಇ 2023 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು